ಅ) ರೂ. 25.34 ಲಕ್ಷ.

ಇ) ಇದೆ.

ಈ) ಬಂದಿರುವುದಿಲ್ಲ.

ಉ) ಅನ್ವಯಿಸುವುದಿಲ್ಲ.

ಮಾಗಡಿಯಲ್ಲಿ 30 ಹಾಸಿಗೆಗಳ ಆಸ್ಪತ್ರೆಯ ಬಗ್ಗೆ.

(306) - ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಮಾಗಡಿಯಲ್ಲಿ 30 ಹಾಸಿಗೆಯ ಸರ್ಕಾರಿ ಆಸ್ಪತ್ರೆಯ ಕಟ್ಟಡ ನಿರ್ಮಾಣದ ಕಾರ್ಯ ಪ್ರಾರಂಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಈಗ ಅಲ್ಲಿ ಕೆಲಸ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

3) ಹಾಗಿದ್ದಲ್ಲಿ ಅದನ್ನು ಯಾವಾಗ ಪೂರ್ಣಗೊಳಿಸಲಾಗುವುದು.

ಶ್ರೀಮತಿ. ಕೆ. ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಂದಿದೆ.

ಆ) ಇಲ್ಲ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.

ಇ) ಜಿಲ್ಲಾ ಪರಿಷತ್ತಿನಿಂದ ಸಾಕಷ್ಟು ಅನುದಾನ ಬಿಡುಗಡೆ ಮಾಡುವುದರ ಮೇಲೆ ಅವಲಂಭಿಸಿರುತ್ತದೆ.

ಆರೋಗ್ಯ ಇಲಾಖೆಯ ವಾಹನಗಳ ಬಗ್ಗೆ.

(308) - ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆರೋಗ್ಯ ಇಲಾಖೆಯಲ್ಲಿರುವ ಬಳಕೆಗೆ ಯೋಗ್ಯವಲ್ಲದ ವಾಹನಗಳ ಸಂಖ್ಯೆ ಎಷ್ಟು?

ಆ) ಈ ವಾಹನಗಳನ್ನು ಹರಾಜು ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

ಇ) ಇವುಗಳಲ್ಲಿ ಕೇಂದ್ರ ಸರ್ಕಾರದಿಂದ ಬಂದಿರುವ ವಾಹನಗಳೆಷ್ಟು?

ಶ್ರೀಮತಿ. ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 197.

ಆ) ನಿರುಪಯುಕ್ತವಾದ ವಾಹನಗಳನ್ನು ವಿಲೇವಾರಿ ಮಾಡಲು ಸರ್ಕಾರಕ್ಕೆ ಮಾತ್ರ ಅಧಿಕಾರವಿತ್ತು. ಇತ್ತೀಚಿಗೆ ನಿರುಪಯುಕ್ತ ವಾಹನಗಳನ್ನು ಜಾಗ್ರತೆಯಾಗಿ ವಿಲೇವಾರಿ ಮಾಡಲು ಜಿಲ್ಲಾ ಪರಿಷತ್ತಿನ ಮುಖ್ಯ ಕಾರ್ಯದರ್ಶಿಗಳಿಗೆ ಅಧಿಕಾರ ನೀಡಲಾಗಿದೆ.

ಇ) 127.

ಕುಟುಂಬ ಸಂತಾನ ಶಸ್ತ್ರ ಚಿಕಿತ್ಸೆ ಬಗ್ಗೆ.

(309) - ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?